ಮೈಸೂರ ರೆವಿನ್ಯೂ ಸರ್ವೆ ಮತ್ತು ಸೆಟ್ಲಮೆಂಟ ಇಲಾಖಾ.

ಇಸ್ತಿಹಾರ್ನಾಮೆ.

ನಂ. 181—ಬೆಂಗಳೂರು, ತಾರೀಖು 20ನೆ ಫೆಬ್ರುವರಿ 1907ನೆ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯತಕ್ಕ ಬಗ್ಗೆ ಪ್ರಕಟಸಲ್ಪಡುವದೇನಂದರೆ—ಅವ್ವಲ್ ಸರ್ವೆ ಜಮಾಬಂದಿ ಕಾಲದಲ್ಲಿ ಬೆಂಗಳೂರು ಡಿಸ್ಟ್ರಿಕ್ಟು ಪೈಕಿ ಸಾಬಕು ಬೆಂಗಳೂರು ಮತ್ತು ಕೆಂಗೇರಿ ತಾಲ್ಲೂಕುಗಳಿಗೆ ಸೇರಿದ್ದು ಹಾಲಿ ಇದರಡಿ ನಮೂದಿಸಿರುವ 5 ಬೇರೆ ಬೇರೆ ತಾಲ್ಲೂಕುಗಳಲ್ಲಿ ಅಡಗಿರುವ 326 ಸರಕಾರಿ ಗ್ರಾಮಗಳಲ್ಲಿ ಪರಿಶೋಧಿಸಲ್ಪಟ್ಟ ಆಕಾರದ ದರಗಳನ್ನು ಶ್ರೀಮನ್ ಮಹಾರಾಜಾ ಸರ್ಕಾರದವರು ಮಂಜೂರು ಮಾಡಿರುತ್ತಾರಾಗಿ ಸದರಿ ಆಕಾರಯಾನೆ ಕಂದಾಯವನ್ನು ಪ್ರಸಿದ್ಧಪಡಿಸುವಿಕೆಯು ಬೆಂಗಳೂರಿನಲ್ಲಿ 1907ನೆ ಮಾರ್ಚಿ ತಾರೀಖು 18 ಅಥವಾ ಆ ಸುಮಾರಿಗೆ ಪ್ರಾರಂಭಿಸಲ್ಪಡುವದು.

281 ಗ್ರಾಮಗಳು ಹಾಲಿ ಬೆಂಗಳೂರು ತಾಲ್ಲೂಕಿನಲ್ಲಿರುವವು.
17 ಗ್ರಾಮಗಳು ಹಾಲಿ ಚನ್ನಪಟ್ಣ ತಾಲ್ಲೂಕು ಪೈಕಿ ಕ್ಲೋಸಪೇಟೆ ಸಬ್ ತಾಲ್ಲೂಕಿನಲ್ಲಿರುವವು.
22 ಗ್ರಾಮಗಳು ಹಾಲಿ ಮಾಗಡಿ ತಾಲ್ಲೂಕಿನಲ್ಲಿರುವವು.
4 ಗ್ರಾಮಗಳು ಹಾಲಿ ನೆಲಮಂಗಲ ತಾಲ್ಲೂಕಿನಲ್ಲಿರುವವು.
2 ಗ್ರಾಮಗಳು ಹಾಲಿ ಹೊಸಕೋಟೆ ತಾಲ್ಲೂಕಿನಲ್ಲಿರುವವು.
326

ಡಿ. ಶಾಮರಾವ್,
ಸೂಪರಿಂಟೆಂಡೆಂಟ್ ರೆವಿನ್ಯೂ ಸರ್ವೆ ಮತ್ತು ಸೆಟ್ಲಮೆಂಟ್, ಮೈಸೂರು.

ಫಾರೆಸ್ಟು ಇಲಾಖಾ.

ನೋಟಿಸ.

ತಾರೀಖು 1ನೆ ಫೆಬ್ರುವರಿ 1907.

ಗುಡಿಯಾತಂ ತಾಲ್ಲೂಕು ರಾವಾಲಿ ಗ್ರಾಮದ ಕಂಟ್ರಾಕ್ಟರ್ (ಮೃತಪಟ್ಟ) ಸಂಜೀವೈಯ್ಯನೆಂಬುವನು ಖಾತರಿಗಾಗಿ ಇಟ್ಟಿದ್ದ 25 ರೂಪಾಯಿ ತೇವಣಿ ಮೊಬಲಗು ಬೆಂಗಳೂರು ಫಾರೆಸ್ಟು ರೇಂಜಾಫೀಸರಲ್ಲಿ ಪಾವತಿ ಮಾಡದೆ ನಿಂತಿರುತ್ತೆ.

ಸದರಿ ಮೃತಪಟ್ಟ ಕಂಟ್ರಾಕ್ಟರನ ವಾರಸುದಾರರು ಯಾರಾದರೂ ಇದ್ದಲ್ಲಿ ಸದರಿ ಹಣಕ್ಕಾಗಿ ತಕ್ಕ ಸಮಜಾಯಿಷಿಯೊಡನೆ ಈ ತಾರೀಖು ಲಾಗಾಯಿತು 3 ತಿಂಗಳುಗಳೊಳಗಾಗಿ ನಮ್ಮ ಆಫೀಸಿಗೆ ಬರೆದುಕೊಳ್ಳಬೇಕು. ತಪ್ಪಿದಲ್ಲಿ ಸದರಿ ಮೊಬಲಗು ಸರ್ಕಾರಕ್ಕೆ ಸೇರಿಸಿಕೊಳ್ಳಲಾಗುತ್ತೆ.

ಟಿ. ಅಬ್ದುಲ್ ಕರೀಂ,
ಡೆಪ್ಯುಟಿ ಕನ್ಸರ್ವೇಟರ್ ಆಫ್ ಫಾರೆಸ್ಟ್ಸ್, ಬೆಂಗಳೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 21ನೆ ಫೆಬ್ರುವರಿ 1907.

1. ಕಂದಾಯದ ಬಾಕೀದಾರರಾದ ನಾಗಮಂಗಲ ಗ್ರಾಮದ ವೆಂಕಟಲಕ್ಷ್ಮಮ್ಮ ವಗೈರೆಯಿಂದ ಬರಬೇಕಾದ ಜಮೀನ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸರ್ಕಾರಕ್ಕೆ ಸೇರಿಸಿಕೊಂಡ ಸ್ಥಿರಸ್ವತ್ತು ಮೈಸೂರು ಡಿಸ್ಟ್ರಿಕ್ಟು ನಾಗಮಂಗಲ ತಾಲ್ಲೂಕು ಜೋಡಿ ದೊಡ್ಡಾಘಟ್ಟ ಗ್ರಾಮದಲ್ಲಿ 1907ನೆ ಏಪ್ರೆಲ್ 2ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಸದರಿ ತಾರೀಖು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡ ದರಖಾಸ್ತುದಾರನ ಹೆಸರಿಗೆ ವಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1906ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರೆಗೆ ರೂಪಾಯಿ 132—10—6 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಶೇಕಡ 25 ರೂಪಾಯಿಗಳನ್ನ ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜಾ ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಆದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯುಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗದುಕೊಂಡವರು ಹರಾಜ್-ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರಿ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮಿಷನರವರಿಂದ ಸೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಾಲಿತ್ಯಗಳಿಗೆ ಗವರ್ನಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು:—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಸೀಲ್.									ಸರ್ಕಾರಕ್ಕೆ ಬರಬೇಕಾದ ನೋಟಿಸ್ ಫೀ ವಗೈರೆ ಸಹಿತವಾದ ಬಾಕಿ ಮೊಬಲಗು.			
				ಕಟ್ಟಡಗಳು.		ಜಮೀನು.										
				ಕಟ್ಟಡದ ಹೆಸರು.	ಅಂದಾಜು ಕಿಮ್ಮತ್ತು.	ನಂಬರ್ ಅಥವಾ ಜಮೀನಿನ ಹೆಸರು.	ಖುಷ್ಕೀ, ತರೀ ಅಥವಾ ಬಾಗಾಯತು.	ವಿಸ್ತೀರ್ಣ.		ಆಕಾರ.						
								ಎ.	ಗು.	ರೂ.	ಆ.	ಪೈ.	ರೂ.	ಆ.	ಪೈ.	
ನಾಗಮಂಗಲ.	ನೆಲ್ಲಿಗೆರೆ.	ಜೋಡಿ ದೊಡ್ಡಾಘಟ್ಟ.	ವೆಂಕಟಲಕ್ಷಮ್ಮ ವಗೈರೆ 10 ಜನ.	....	...	....	ಪರಂಪೋಕು.	124	36	2	0	0	132	10	6	ಕ್ರೋಧಿ ಮತ್ತು ವಿಶ್ವಾವಸು ಬಾಕಿ.
							ಖುಷ್ಕಿ ...	221	23	173	0	0				
							ತರಿ ...	9	5	28	0	0				
							ಬಾಗಾಯತು.	1	11	5	0	0	0	8	0	ನೋಟಿಸ ಫೀ
							ಜುಮ್ಲಾ ...	356	35	208	0	0	1	0	0	ಜಫ್ತಿ ಹರಾಜ್ ಫೀ.
													134	2	6	ಜುಮ್ಲಾ
						ಸಾಲ್ 1ಕ್ಕೆ ಬರಬೇಕಾದ ಜೋಡಿ ಮೊಬಲಗು				56	3	0	ವಸೂಲ್ ತಾರೀಖುವರೆಗೆ ಬಡ್ಡಿ ಬರಬೇಕು.			

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 21ನೆ ಫೆಬ್ರುವರಿ 1907.

1. ಕಂದಾಯದ ಬಾಕೀದಾರರಾದ ಮೇಗಡಹಳ್ಳಿ ಗ್ರಾಮದ ಗುತ್ತಾದಾರ್ ಮ॥ ನರಸಿಂಹಾಚಾರ್ರಿಂದ ಬರಬೇಕಾದ ಜಮೀನ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಮೈಸೂರು ಡಿಸ್ಟ್ರಿಕ್ಟು ಟಿ. ನರಸೀಪುರ ತಾಲ್ಲೂಕು ಕಛೇರಿಯಲ್ಲಿ 1907ನೆ ಇಸವಿ ಏಪ್ರಿಲ್ ಮಾಹೆ 3ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜ್ ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಹಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2., ಸದರೀ ಸ್ವತ್ತಿಗಾಗಿ ಹರಾಜುದಾರನು 1905—06ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರಿಗೆ ರೂಪಾಯಿ 63—15—5 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತೀ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತ್ತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಅತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯುಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗೆದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದಮೇಲೆ ಡೆಪ್ಯುಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮಿಷನರವರಿಂದ ಸೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಫಿಕೇಟ್ ಅತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಾಲಿತ್ಯಗಳಿಗೆ ಗವರ್ನಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ಮಿಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು:—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಸೀಲ್.						ಸರ್ಕಾರಕ್ಕೆ ಬರಬೇಕಾದ ನೋಟಿಸ್ ಫೀ ವಗೈರೆ ಸಹಿತವಾದ ಬಾಕೀ ಮೊಬಲಗು.
				ಕಟ್ಟಡಗಳು.		ಜಮೀನು.				
				ಕಟ್ಟಡದ ಹೆಸರು.	ಅಂದಾಜು ಕಿಮ್ಮತ್ತು.	ನಂಬರ ಅಥವಾ ಜಮೀನಿನ ಹೆಸರು.	ಖುಷ್ಕಿ-ತರೀ ಅಥವಾ ಬಾಗಾಯತು.	ವಿಸ್ತೀರ್ಣ.	ಆಕಾರ.	
ಟಿ. ನರಸೀಪುರ	ತಲ್ಕಾಡು	ಮಾಯಂಗುತ್ತಾ ಮೇಗಡಹಳ್ಳಿ	ಮಾಯಂಗುತ್ತಾ ದಾರ್ ಪು॥ ನರಸಿಂಹಾಚಾರ			ಗ್ರಾಮಪೂರ್ತಾ	...	...	ರೂ. ಆ. ಪೈ. 251 12 2	ರೂ. ಆ. ಪೈ. 62 7 5 ಖಾ. 1 8 0 ನೋಟೀಸ್ ಫೀ ವಗೈರೆ. 63 15 5 192 12 11 ಮಾಯಂಗುತ್ತಾ 0 7 1 ಕ್ವಿಟ್ರೆಂಟ್ 40 10 9 ಲೋಕಲ್ 233 14 9 ಲೆಕ್ಕಾಚಾರಪ್ರಕಾರ ಬಡ್ಡಿ ಸಹ.

ಸ್ಥಿರಸ್ವತ್ತಿನ ಹರಾಜು ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

ತಾರೀಖು 15-21ನೆ ಫೆಬ್ರವರಿ 1907.

1. ಕಂದಾಯದ ಬಾಕೀದಾರರಾದ ಜೋಡಿ ಹೊನ್ನೂರು ಗ್ರಾಮದ ಜೋಡಿದಾರ್ರಿಂದ ಬರಬೇಕಾದ ಜಮೀನ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಮೈಸೂರು ಡಿಸ್ಟ್ರಿಕ್ಟ್ ಟಿ. ನರಸೀಪುರ ತಾಲ್ಲೂಕು ಕಚೇರಿಯಲ್ಲಿ 1907ನೆ ಏಪ್ರಲ್ ಮಾಹೆ 3ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ದಿವಾ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಫಿಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1905-06ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಶೀಲ್ ಮೇರಿಗೆ ರೂಪಾಯಿ 644—6—8 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಸೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತ್ತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತೀ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದ್ದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ, ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯುಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ, ಡೆಪ್ಯುಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮಿಷನರವರಿಂದ ಸೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಾಲಿತ್ಯಗಳಿಗೆ ಗವರ್ನಮೆಂಟಿನವರು ಜವಾಬ್‌ದಾರರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ಮಾಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು :—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಶೀಲ್.						ಸರ್ಕಾರಕ್ಕೆ ಬರಬೇಕಾದ ನೋಟಿಸ್ ಫೀ ವಗೈರೆ ಸಹಿತವಾದ ಬಾಕೀ ಮೊಬಲಗು.
				ಕಟ್ಟಡಗಳು.		ಜಮೀನು.				
				ಕಟ್ಟಡದ ಹೆಸರು.	ಅಂದಾಜಾ ಕಿಮ್ಮತು.	ನಂಬರ್ ಅಥವಾ ಜಮೀನಿನ ಹೆಸರು.	ಖುಷ್ಕೀ, ತರೀ ಅಥವಾ ಬಾಗಾಯತು.	ವಿಸ್ತೀರ್ಣ.	ಆಕಾರ.	
					ರೂ.			ಎ. ಗು.	ರೂ. ಆ. ಪೈ.	ರೂ. ಆ. ಪೈ.
ಟಿ. ನರಸೀಪುರ.	ಕಸಬಾ ನರಸೀಪುರ.	ಜೋಡಿ ಹೊನ್ನೂರು.	ಜೋಡಿದಾರ್ ವೆಂಕಟರಮಣಯ್ಯ ವಗೈರೆ.			ಗ್ರಾಮ ಪೂರಾ...		519 36	684 7 11	515 14 2 ಜೋಡಿ 21 1 10 ಕ್ವಿಟ್ರೆಂಟ್ 43 2 8 ಲೋಕಲ್ 580 2 8 62 12 0 ಇರಿಗೇಷನ್ 642 14 8 ಜಮ 1 8 0 ಖರ್ಚು 644 6 8 ಮತ್ತು ಪಾವತಿ ತಾರೀಖು ವರೆಗಿನ ಬಡ್ಡಿ ಸಹ

ಟಿ. ಕೆ. ಸುಂದರರಾಜೈಯ್ಯಂಗಾರ್,
ಛಾರ್ ಡೆಪ್ಯುಟಿ ಕಮಿಷನರ್.